10. ಆದಿಚುಂಚನಗಿರಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಬೆಳ್ಳೂರು ರೂ. 43.13
11. ಶ್ರೀ ದೇವರಾಜ್ ಅರಸ್ ವೈದ್ಯಕೀಯ ಕಾಲೇಜು, ಕೋಲಾರ ರೂ. 06.83
12. ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜು, ತುಮಕೂರು ರೂ. 07.47

ಇ) ಹೌದು

ಹಳಿಯಾಳದಲ್ಲಿ ರೇಷ್ಮೆ ಫಾರಂ ಸ್ಥಾಪನೆ.

1077. ಶ್ರೀ ಆರ್. ವಿ. ದೇಶಪಾಂಡೆ (ಹಳಿಯಾಳ) :- ಮಾನ್ಯ ರೇಷ್ಮೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ –

ಅ) ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದಲ್ಲಿ ರೇಷ್ಮೆ ಫಾರಂ ಸ್ಥಾಪಿಸಲು ಸರ್ಕಾರ ನಿರ್ಧರಿಸಿರುವುದು ನಿಜವೇ;
ಆ) ಹಾಗಿದ್ದಲ್ಲಿ, ಇದಕ್ಕಾಗಿ ಭೂಮಿಯನ್ನು ವಶಪಡಿಸಿಕೊಳ್ಳಲಾಗಿದೆಯೇ;
ಇ) ಇದಕ್ಕಾಗಿ ಎಷ್ಟು ಹಣವನ್ನು ಇದುವರೆವಿಗೂ ವೆಚ್ಚ ಮಾಡಲಾಗಿದೆ;
ಈ) ರೇಷ್ಮೆ ಫಾರಂ ಅನ್ನು ಅಲ್ಲಿ ಯಾವಾಗ ಸ್ಥಾಪಿಸಲಾಗುವುದು?

ಶ್ರೀ ವಿ. ಮುನಿಯಪ್ಪ (ರೇಷ್ಮೆ ರಾಜ್ಯ ಸಚಿವರು) –

ಅ) ಹೌದು
ಆ) ವಶಪಡಿಸಿಕೊಳ್ಳಲಾಗಿದೆ
ಇ) 8.62 ಲಕ್ಷ ರೂಪಾಯಿಗಳು.
ಈ) 1992 ಡಿಸೆಂಬರ್ ಅಂತ್ಯದೊಳಗೆ ಸ್ಥಾಪಿಸಲಾಗುವುದು.

ಮೈಸೂರು ಕ್ರೋಂ ಟ್ಯಾನಿಂಗ್ ಕಾರ್ಖಾನೆಯನ್ನು ಖಾಸಗಿಯವರಿಗೆ ಹಸ್ತಾಂತರ.

1080. ಶ್ರೀ ಪಿ.ಸಿ. ಸಿದ್ದನಗೌಡರ್ (ಕಲಘಟಗಿ) :- ಮಾನ್ಯ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ –

ಅ) ಮೈಸೂರು ಕ್ರೋಂ ಟ್ಯಾನಿಂಗ್ ಕಂಪನಿಯಲ್ಲಿ ಶೇಕಡಾ 90 ರಷ್ಟು ಪರಿಶಿಷ್ಟ ಕಾರ್ಮಿಕರು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;
ಆ) ಹಾಗಿದ್ದಲ್ಲಿ, ಮೇಲ್ಕಂಡ ಕಾರ್ಖಾನೆಯನ್ನು ಖಾಸಗಿಯವರಿಗೆ ಹಸ್ತಾಂತರ ಮಾಡುವುದನ್ನು ನಿಲ್ಲಿಸಿ ಸರ್ಕಾರದಿಂದ ಮತಿಯಿಂದ ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುವರೆ ;
ಇ) ಇಲ್ಲದಿದ್ದಲ್ಲಿ, ಮೇಲ್ಕಂಡ ಕಾರ್ಖಾನೆಯನ್ನು ಹಸ್ತಾಂತರ ಮಾಡುವಾಗ ಪರಿಶಿಷ್ಟ ಕಾರ್ಮಿಕರಿಗೆ ಅನ್ಯಾಯವಾಗದಂತೆ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

ಶ್ರೀಮತಿ ಮನೋರಮಾ ಮಧ್ವರಾಜ್ (ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರು) –

ಅ) ಹೌದು
ಆ) ಈ ಕಂಪನಿಯು ಕೆಲವು ವರ್ಷಗಳಿಂದ ಸತತವಾಗಿ ನಷ್ಟ ಅನುಭವಿಸುತ್ತಿರುವುದರಿಂದ ಇದನ್ನು ಮುಚ್ಚಲು ಸರ್ಕಾರ ತೀರ್ಮಾನ ತೆಗೆದುಕೊಂಡಿದೆ.
ಇ) ಉದ್ಭವಿಸುವುದಿಲ್ಲ